ಪ್ರಸ್ತಾವದ ಅಂಗೀಕಾರ

ಶ್ರೀ ಎ.ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು) : ಮಾನ್ಯ ಅಧ್ಯಕ್ಷರೆ, " ವಿಧಾನ ಪರಿಷತ್ತಿನಿಂದ ಅಂಗೀಕೃತ ರೂಪದಲ್ಲಿರುವ 2004ರ ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) (2ನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ. "

ಅಧ್ಯಕ್ಷರು : ಪ್ರಸ್ತಾವ ಏನೆಂದರೆ : " ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2004ನೇ ಸಾಲಿನ ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) (2ನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು "

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆ ಒಪ್ಪಿಗೆ ನೀಡಲಾಯಿತು.

ಶ್ರೀ ಡಿ.ಬಿ.ಚಂದ್ರೇಗೌಡ(ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೆ, ಬಹಳ ಮುಖ್ಯವಾದಂತಹ ಎರಡು ಮಸೂದೆಗಳು ಇದ್ದಾವೆ. ಅದರಲ್ಲಿ ಒಂದು ಮಾನ್ಯ ಮುಖ್ಯಮಂತ್ರಿಗಳ ಹೆಸರಿನಲ್ಲಿ ಇರತಕ್ಕಂಥದ್ದು – 2004ನೇ ಸಾಲಿನ ಕರ್ನಾಟಕ ಹಣಕಾಸು ಸಂಸ್ಥೆಯ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ ವಿಧೇಯಕ ಅದು ಇಲ್ಲಿ ಮಂಜೂರಾಗಿ ಹೋಗಿರತಕ್ಕದ್ದು. ಎರಡೂ ಸದನದಲ್ಲಿ ಒಪ್ಪಿಗೆ ಆಗಿರತಕ್ಕಂಥದ್ದು ರಾಷ್ಟ್ರಾಧ್ಯಕ್ಷರು ಅದನ್ನು ತಾಂತ್ರಿಕ ಕಾರಣಕ್ಕಾಗಿ ವಾಪಸ್ ಹಾಕಿದ್ದಾರೆ. ಆ ಮಸೂದೆ ನಾವು ಒಪ್ಪಿರತಕ್ಕಂಥ ಮಸೂದೆ; ಮಂಜೂರಾಗಿರತಕ್ಕಂಥದ್ದು. ಮಾನ್ಯ ಸುರೇಶ್ ಕುಮಾರ್ ಅವರೇ ಅದರ ಶಿಲ್ಪಿಗಳು. ನಾವು ಅದನ್ನು ಮಂಜೂರು ಮಾಡಿಕೊಟ್ಟಿದ್ದೇವೆ.

ಶ್ರೀ ಅರಗ ಜ್ಞಾನೇಂದ್ರ : ಸಂಸ್ಥೆಯ ಶಿಲ್ಪಗಳಲ್ಲಿ, ಮಸೂದೆಯ ಶಿಲ್ಪಿಗಳು. ತಪ್ಪು ಅಭಿಪ್ರಾಯ ಬರಬಾರದು.

ಶ್ರೀ ಡಿ.ಬಿ.ಚಂದ್ರೇಗೌಡ : ಮಸೂದೆಯ ಶಿಲ್ಪಿಗಳು ಎಂದು ಹೇಳುತ್ತೇನೆ. ಪ್ರೆಸಿಡೆಂಟ್ ಆಫ್ ಇಂಡಿಯಾದಿಂದ ಟೆಕ್ನಿಕಲ್ ರೀಸನ್‌ಗೆ ವಾಪಸ್ ಬಂದಿದೆ. ಅದ್ದರಿಂದ ಇದನ್ನು ಒಂದು ತೆಗೆದುಕೊಳ್ಳಬೇಕು. ಎರಡನೆಯದಾಗಿ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ) (ತಿದ್ದುಪಡಿ) ವಿಧೇಯಕದ ಬಗ್ಗೆ ಸಂಬಂಧಪಟ್ಟ ಮಾನ್ಯ ಮಂತ್ರಿಗಳು ಹೇಳುತ್ತಾರೆ. ಈ ಎರಡು ಮಸೂದೆಗಳನ್ನು ಇಂಟ್ರಡ್ಯೂಸ್ ಮಾಡುವುದಕ್ಕೆ ಅವಕಾಶ ಆಗಬೇಕು.

ಇ) ವಿಧೇಯಕಗಳ ಮಂಡನೆ:

(1) ಕರ್ನಾಟಕ ಹಣಕಾಸು ಸಂಸ್ಥೆಗಳನ್ನು ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ ವಿಧೇಯಕ, 2004

ಮಂಡನೆಗೆ ಅನುಮತಿ ಕೋರಿಕೆ :

ಶ್ರೀ ಡಿ.ಬಿ.ಚಂದ್ರೇಗೌಡ (ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) : (ಮಾನ್ಯ ಮುಖ್ಯಮಂತ್ರಿಗಳ ಪರವಾಗಿ):–ಮಾನ್ಯ ಅಧ್ಯಕ್ಷರೆ, " 2004ರ ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ. "

ಅಧ್ಯಕ್ಷರು : ಪ್ರಸ್ತಾವ ಏನೆಂದರೆ: " 2004ರ ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಡಿ.ಬಿ.ಚಂದ್ರೇಗೌಡ : ಮಾನ್ಯ ಅಧ್ಯಕ್ಷರೆ, "2004ರ ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ. "

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ. (ಅನುಬಂಧ – IV)

(II) ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ) (ತಿದ್ದುಪಡಿ) ವಿಧೇಯಕ, 2004

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ.ಎಸ್. ಪಾಟೀಲ್ (ಸಾಸನೂರು) : (ಕೃಷಿ ಉತ್ಪನ್ನ ಮಾರುಕಟ್ಟೆ ಸಚಿವರು) :– ಮಾನ್ಯ ಅಧ್ಯಕ್ಷರೆ, " 2004ರ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, " 2004ರ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಬಿ.ಎಸ್.ಪಾಟೀಲ್ (ಸಾಸನೂರು) : ಮಾನ್ಯ ಅಧ್ಯಕ್ಷರೆ, " 2004ರ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ. (ಅನುಬಂಧ – V)

ಗೊಂದಲ

ಶ್ರೀ ಹೆಚ್.ಸಿ. ಶ್ರೀಕಂಠಯ್ಯ : ರಾಮದಾಸ್ ಅವರೇ, ಒಂದು ಸಣ್ಣ ಬಿಲ್ ಇದೆ, ಒಂದೇ ನಿಮಿಷ ಮಂಡನೆ ಮಾಡುತ್ತೇನೆ.

ಶ್ರೀ ಎ. ರಾಮದಾಸ್ : ಆಗಲೇ ಮಾನ್ಯ ಸಚಿವರು ಮಸೂದೆಯನ್ನು ಮಂಡನೆ ಮಾಡುತ್ತೇನೆಂದರು, ಅದಕ್ಕೆ ಅವಕಾಶ ಇದೆ; ನಾಳೆ ತಾವು ಮಂಡನೆ ಮಾಡಿ.

ಶ್ರೀ ಹೆಚ್.ಸಿ. ಶ್ರೀಕಂಠಯ್ಯ : ಒಂದೇ ನಿಮಿಷ, ಅದರೊಳಗೆ ದೊಡ್ಡ ವಿಚಾರ ಏನೂ ಇಲ್ಲ. ಒಂದೇ ನಿಮಿಷದಲ್ಲಿ ಹೇಳುತ್ತೇನೆ.

(III) ಕರ್ನಾಟಕ ಸಾರ್ವಜನಿಕ ಅವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ)(ತಿದ್ದುಪಡಿ) ವಿಧೇಯಕ, 2003

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು) : ಮಾನ್ಯ ಅಧ್ಯಕ್ಷರೆ, " 2003ನೇ ಸಾಲಿನ ಕರ್ನಾಟಕ ಸಾರ್ವಜನಿಕ ಅವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, " 2003ರ ಕರ್ನಾಟಕ ಸಾರ್ವಜನಿಕ ಅವರಣಗಳ (ಅಪ್ರಧಿಕೃತ ಅಧಿಭೋಗದಾರರನ್ನು ಹೊರಹಾಕುವ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು "